ಇಲಾಖೆ / ವಿಷಯ: DEPARTMENT / SUBJECT: ಶಿಕ್ಷಣ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ ದಿನಾಂಕ : DATE : 30/07/2019

# ಮೈತ್ರಿ ಸರ್ಕಾರ ನೇಮಿಸಿದ್ದ 13 ವಿ 70 ಸಿಂಡಿಕೇಟ್ ಸದಸ್ಯರು ವಜಾ

## ಸಮ್ಮಿಶ್ರ ಸರ್ಕಾರ ಪತನಕ್ಕೆ 3 ದಿನವಿದ್ದಾಗ ನೇಮಕವಾಗಿದ್ದರು

• **ಕನ್ನಡಪ್ರಭ ವಾರ್ತೆ** ಬೆಂಗಳೂರು 30/7/19

ಕಾಂಗ್ರೆಸ್-ಜೆಡಿಎಸ್ ಸಮ್ಮಿಶ್ರ ಸರ್ಕಾರ ಪತನಕ್ಕೂ ಮುನ್ನ ರಾಜ್ಯದ 13 ವಿಶ್ವವಿದ್ಯಾಲಯಗಳಿಗೆ ಸಿಂಡಿಕೇಟ್ ಸದಸ್ಯರ ನೇಮಕಾತಿ ಮಾಡಿ ಹೊರಡಿಸಿದ್ದ ಆದೇಶವನ್ನು ನೂತನ ಸರ್ಕಾರ ರದ್ದುಗೊಳಿಸಿದೆ.

ಸಮ್ಮಿಶ್ರ ಸರ್ಕಾರದ ಪತನಕ್ಕೂ 3 ದಿನ ಮೊದಲು (ಜು.19) ರಾಜ್ಯದ 13 ವಿಶ್ವವಿದ್ಯಾಲಯಗಳಿಗೆ 70 ನಾಮನಿರ್ದೇಶಿತ ಸದಸ್ಯರನ್ನು ನೇಮಕ ಮಾಡಿತ್ತು. ಇವರ ಅಧಿಕಾರಾವಧಿ ಮುಂದಿನ ಮೂರು ವರ್ಷ ಅಥವಾ ಹೊಸ ಆದೇಶ ಹೊರಡಿಸುವವರೆಗೆ ಎಂದು ಆದೇಶದಲ್ಲಿ ತಿಳಿಸಿತ್ತು. ಬಿ.ಎಸ್. ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸುತ್ತಿದ್ದಂತೆ ಈ ಹಿಂದಿನ ಸರ್ಕಾರ ಜುಲೈನಲ್ಲಿ ಹೊರಡಿಸಿರುವ ಆದೇಶಗಳು ಮತ್ತು ಪ್ರಸ್ತಾವನೆಗಳನ್ನು ತಡೆಹಿಡಿಯುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯಭಾಸ್ಕರ್ ಅವರು ಆದೇಶ ಹೊರಡಿಸಿದ್ದರು.